**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದ ರಾಜು ಇವರ ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಮಾಹಿತಿ**

**ಸೂಚನಾ ವಿಷಯ**

**ಕೋಲಾರ ಜಿಲ್ಲೆ, ಲೋಕೋಪಯೋಗಿ ಇಲಾಖಾಯಡಿಯಲ್ಲಿ ಗುತ್ತಿಗೆದಾರರು ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ, ರಾಜ್ಯ ಹೆದ್ದಾರಿ ರಸ್ತೆ, ಸೇತುವೆಗಳು, ನ್ಯಾಯಾಧೀಶರ ಕಟ್ಟಡಗಳು ಹಾಗೂ ನಿರ್ವಹಣೆ ಮತ್ತು ದುರಸ್ತಿ ಇವುಗಳ ಕಾಮಗಾರಿಯನ್ನು ಪೂರ್ಣಗೊಳಿಸಿರುವ ಇವರುಗಳಿಗೆ, ಸರ್ಕಾರದಿಂದ ನೀಡಬೇಕಾಗಿರುವ ಬಾಕಿ ಹಣ ರೂ.119 ಕೋಟಿ ಹಾಗೂ ಪ್ರಸ್ತುತ ನಡೆಯುತ್ತಿರುವ ಕಾಮಗಾರಿಗಳ ಬಾಕಿ ಹಣ ಸೇರಿ ಒಟ್ಟು 200 ಕೋಟಿ ರೂಪಾಯಿಗಳನ್ನು ಬಿಡುಗಡೆಗೊಳಿಸಬೇಕಾಗಿದೆ. ಬಾಕಿ ಹಣವನ್ನು ಇದುವರೆಗೂ ನೀಡದೇ ಇರುವುದರಿಂದ ಗುತ್ತಿಗೆದಾರರು ಆರ್ಥಿಕವಾಗಿ ಸಂಕಷ್ಟದಲ್ಲಿ ಸಿಲುಕಿದ್ದಾರೆ. ಕೋಟ್ಯಂತರ ರೂಪಾಯಿಗಳನ್ನು ಸಾಲ ಮಾಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಈ ಕೂಡಲೇ ಹಣ ಬಿಡುಗಡೆಗೆ ಆದೇಶ ನೀಡಬೇಕಾಗಿರುವ ಹಿನ್ನೆಲೆಯಲ್ಲಿ, ಈ ವಿಷಯವನ್ನು ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.**

**--**--**

ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಿಂದ ಕೈಗೊಂಡಿರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಮೇ-2023ರ ಅಂತ್ಯಕ್ಕೆ ವಿವಿಧ ಲೆಕ್ಕಶೀರ್ಷಿಕೆಗಳಡಿ ಒಟ್ಟಾರೆ ರೂ.8506.00 ಕೋಟಿ ಮೊತ್ತದ ಬಿಲ್ಲುಗಳು ಪಾವತಿಗೆ ಬಾಕಿಯಿರುತ್ತವೆ. 2023-24ನೇ ಸಾಲಿನ ಆಯವ್ಯಯದಲ್ಲಿ ರೂ.9111.20 ಕೋಟಿ ಅನುದಾನ ಒದಗಿಸಲಾಗಿರುತ್ತದೆ. ಸದರಿ ಅನುದಾನವನ್ನು ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗುವ ಅಧಿಕಾರದಂತೆ ಪ್ರತಿ ಮಾಹೆ ಬಾಕಿಬಿಲ್ಲುಗಳನ್ನು ಆಧರಿಸಿ ವಲಯಗಳಿಗೆ ಬಿಡುಗಡೆ ಮಾಡಲಾಗುವುದು. ಈ ಅನುದಾನವನ್ನು ವಲಯಗಳು ವಿಭಾಗಗಳಿಗೆ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತದೆ.

ಕೋಲಾರ ವಿಭಾಗದಲ್ಲಿ ಒಟ್ಟಾರೆ ರೂ.126.95 ಕೋಟಿ ಮೊತ್ತದ ಬಿಲ್ಲುಗಳು ಬಾಕಿಯಿರುತ್ತವೆ. ಈ ಬಿಲ್ಲುಗಳನ್ನು ಪ್ರತಿ ಮಾಹೆ ಬಿಡುಗಡೆ ಮಾಡಲಾಗುವ ಅನುದಾನದಲ್ಲಿ ತೀರುವಳಿ ಮಾಡಲು ಕ್ರಮವಹಿಸಲಾಗುವುದು.

**ಲೋಇ/937/ಐಎಫ್ಎ/2023(ಇ-ಕಚೇರಿ)**

**(ಸತೀಶ್ ಜಾರಕಿಹೊಳಿ)**
**ಲೋಕೋಪಯೋಗಿ ಸಚಿವರು**